# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 46+96

ಸದಸ್ಯರ ಹೆಸರು : ಶ್ರೀ ನಿರಾಣಿ ಹಣಮಂತ್ ರುದ್ರಪ್ಪ ಮತ್ತು ಶ್ರೀ ಎಸ್.ವ್ಹಿ.ಸಂಕನೂರ (ಪದವೀಧರರ ಕ್ಷೇತ್ರ)

ಉತ್ತರಿಸುವ ದಿನಾಂಕ : 13-02-2023

ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಹಾಗೂ ಸಕಾಲ ಸಚಿವರು

<table>
<tr><th>ಕ್ರಮ ಸಂಖ್ಯೆ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಸರ್ಕಾರಿ ಪ್ರೌಢ ಶಾಲೆಯ ಸಹ ಶಿಕ್ಷಕರುಗಳಿಗೆ ಪದವಿ ಪೂರ್ವ ಉಪನ್ಯಾಸಕರಾಗಿ ಬಡ್ತಿ ನೀಡಲಾಗುತ್ತಿದೆಯೇ;</td><td rowspan="2">ಹೌದು.<br><br>1998ರ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ 2011-12ನೇ ಸಾಲಿನಲ್ಲಿ ಪ್ರೌಢಶಾಲಾ ಸಹಶಿಕ್ಷಕರ ವೃಂದದಿಂದ ಉಪನ್ಯಾಸಕರ ವೃಂದಕ್ಕೆ ಬಡ್ತಿ ಕೋಟಾದಲ್ಲಿ 50:50 ಅನುಪಾತದಲ್ಲಿ ಒಟ್ಟು 1184 ಹುದ್ದೆಗಳಿಗೆ ಸ್ಥಾನಪನ್ನ ಬಡ್ತಿ ನೀಡಿ ಆದೇಶಿಸಲಾಗಿದೆ.</td></tr>
<tr><td>ಆ)</td><td>ಈ ಹಿಂದೆ ಎಷ್ಟು ಪ್ರೌಢ ಶಾಲೆಯ ಸಹ ಶಿಕ್ಷಕರುಗಳಿಗೆ ಬಡ್ತಿಯನ್ನು ನೀಡಲಾಗಿದೆ: ಯಾವಾಗ ನೀಡಲಾಗಿದೆ: (ಸಂಪೂರ್ಣ ಮಾಹಿತಿ ನೀಡುವುದು)</td></tr>
<tr><td>ಇ)</td><td>ಕಳೆದ ಸುಮಾರು 10 ವರ್ಷಗಳಿಂದ ಶಿಕ್ಷಕರುಗಳಿಗೆ ಬಡ್ತಿ ನೀಡದಿರಲು ಕಾರಣಗಳೇನು ಈ ಕುರಿತು ಸರ್ಕಾರ ಕೈಗೊಂಡ ಕ್ರಮವೇನು:</td><td rowspan="3">ಈ ಕೆಳಗಿನ ಕಾರಣಗಳಿಂದಾಗಿ ಸಹ ಶಿಕ್ಷಕರುಗಳಿಗೆ ಬಡ್ತಿ ನೀಡುವಲ್ಲಿ ವಿಳಂಬವಾಗಿರುತ್ತದೆ:<br><br>1. 2014ರಲ್ಲಿ 371 ಜೆ (ಕಲ್ಯಾಣ ಕರ್ನಾಟಕ) ಅಧಿಸೂಚನೆ ಹೊರಡಿಸಲಾಗಿದ್ದರಿಂದ ಉಪನ್ಯಾಸಕರ ಜೇಷ್ಠತಾ ಪಟ್ಟಿ ವಿಂಗಡಿಸಿ ತಯಾರಿಸಲು ಕ್ರಮವಹಿಸಲಾಗಿದೆ.<br>2. ಬಿ.ಕೆ.ಪವಿತ್ರ ಪ್ರಕರಣ 1 ಮತ್ತು 2ರಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ನೀಡಿರುವ ತೀರ್ಪಿನನ್ವಯ ಸರ್ಕಾರದ ಆದೇಶ ದಿನಾಂಕ:06-05-2017 ಮತ್ತು ದಿನಾಂಕ:15-05-2019ರಂತೆ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನ್ಯಾಸಕ ವೃಂದ ಸೇರಿದಂತೆ ಎಲ್ಲಾ ವೃಂದಗಳ ಜೇಷ್ಠತಾ ಪಟ್ಟಿಗಳನ್ನು ಪರಿಷ್ಕರಿಸುವ ಕಾರ್ಯ ಹಾಗೂ ಹಿಂಬಡ್ತಿ ಮತ್ತು ಮುಂಬಡ್ತಿ ಪ್ರಕ್ರಿಯೆ ಸಂಬಂಧಿಸಿದ ಕಾರ್ಯಗಳನ್ನು ನಿರ್ವಹಿಸಲಾಗಿದೆ.<br>3. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 106 ಸೆನೆನಿ 2021 ದಿನಾಂಕ:10-12-2021ರಲ್ಲಿನ ಮಾರ್ಗಸೂಚಿಗಳನ್ವಯ ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳನ್ನು ಭರ್ತಿ ಮಾಡುವಾಗ (ನೇರ ಮತ್ತು ಬಡ್ತಿ) ರಿಕ್ತ ಸ್ಥಾನ ಆಧಾರಿತ ವರ್ಗೀಕರಣದ ಬದಲಾಗಿ ಹುದ್ದೆ ಆಧಾರಿತ ವರ್ಗೀಕರಣವನ್ನು ಅನುಸರಿಸಲು ಕ್ರಮವಹಿಸಲಾಗಿದೆ.</td></tr>
<tr><td>ಈ)</td><td>ನೂತನ ನಿಯಮಾವಳಿ ರೂಪಿಸಿದ್ದರೂ ಸಹ ಪ್ರೌಢ ಶಾಲೆಯ ಸಹ ಶಿಕ್ಷಕರುಗಳಿಗೆ ಬಡ್ತಿ ನೀಡದಿರಲು ಕಾರಣಗಳೇನು:</td></tr>
<tr><td>ಉ)</td><td>ಬಡ್ತಿ ನೀಡುವಲ್ಲಿ ಇರುವ ಸಮಸ್ಯೆಗಳನ್ನು ಪರಿಹರಿಸಿ ಬಡ್ತಿ ನೀಡುವ ಪ್ರಕ್ರಿಯೆಯನ್ನು ಯಾವ ಕಾಲಮಿತಿಯಲ್ಲಿ ಪ್ರಾರಂಭಿಸಲಾಗುವುದು? (ಸಂಪೂರ್ಣ ಮಾಹಿತಿ ನೀಡುವುದು)</td></tr>
</table>

| | | |
|---|---|---|
| | | 4. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ದಿನಾಂಕ:17-11-2022ರ ಟಿಪ್ಪಣಿಯಲ್ಲಿ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳಿಗೆ ಹೆಚ್ಚಿಸಲಾಗಿರುವ ಮೀಸಲಾತಿಯನ್ನು ಜಾರಿಗೊಳಿಸಲು ರೋಸ್ಟರ್ ಬಿಂದುಗಳನ್ನು ಗುರುತಿಸುವ ಪ್ರಕ್ರಿಯೆ ಅಂತಿಮಗೊಳ್ಳುವವರೆಗೂ ರಾಜ್ಯಾಧೀನ ಸೇವೆಗಳಲ್ಲಿನ ನೇರ ನೇಮಕಾತಿ ಮತ್ತು ಮುಂಬಡ್ತಿ ಪ್ರಕ್ರಿಯೆಗಳನ್ನು ತಡೆಹಿಡಿಯಲಾಗಿರುತ್ತದೆ.<br>ಸಾರ್ವಜನಿಕ ಶಿಕ್ಷಣ ಇಲಾಖೆಯಿಂದ ಉಪನ್ಯಾಸಕರ ವೃಂದಕ್ಕೆ ಮುಂಬಡ್ತಿ ಹೊಂದುವ ಸಹ ಶಿಕ್ಷಕರ ಜೇಷ್ಠತಾ ಪಟ್ಟಿಯನ್ನು ಪಡೆಯಲಾಗಿದೆ.<br>ಪ್ರಸ್ತುತ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯು ನೇರ ನೇಮಕಾತಿ ಹಾಗೂ ಮುಂಬಡ್ತಿಗೆ ಸಂಬಂಧಿಸಿದಂತೆ ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 01 ಸೇಹಿಮ 2022 ದಿನಾಂಕ:28-12-2022 ಮತ್ತು ಆದೇಶ ಸಂಖ್ಯೆ:ಸಿಆಸುಇ 02 ಸೇಹಿಮ 2022 ದಿನಾಂಕ:28-12-2022ರಲ್ಲಿ ರೋಸ್ಟರ್ ಬಿಂದುಗಳನ್ನು ನಿಗಧಿಗೊಳಿಸಿದ್ದು, ಅದರನ್ವಯ ಮುಂಬಡ್ತಿ ಕೋಟಾದಡಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಅಗತ್ಯ ಕ್ರಮಕೈಗೊಳ್ಳಲಾಗುವುದು. |

**ಸಂಖ್ಯೆ: ಇಪಿ 27 ಡಿಜಿಡಬ್ಲ್ಯೂ 2023**

(ಬಿ.ಸಿ. ನಾಗೇಶ್)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಹಾಗೂ ಸಕಾಲ ಸಚಿವರು